# ಹಿಂಬರಹ

**ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2016** 14812 **ದಿನಾಂಕ: 08-03-2017**

ದಿನಾಂಕ:17-02-2017 ರ ಸರ್ಕಾರಿ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಆಇ 6 ಎಸ್‌ಆರ್‌ಪಿ 2017 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಬಿಯುಡಿ ವಿಭಾಗಕ್ಕೆ ಮಾಹಿತಿಗಾಗಿ
4. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

CN 7046

# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 6 ಎಸ್ಆರ್‌ಪಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 17-02-2017.

## ಅಧಿಕೃತ ಜ್ಞಾಪನ

ವಿಷಯ: ಅಂಗವಿಕಲತೆಯುಳ್ಳ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಯಾಂತ್ರಿಕ ವಾಹನವನ್ನು ಖರೀದಿಸಲು ನೀಡುವ ಸಹಾಯಧನವನ್ನು ಹಿಂಬರಿಸುವ ಬಗ್ಗೆ ಸ್ಪಷ್ಟೀಕರಣ.

ಉಲ್ಲೇಖ: ದಿನಾಂಕ:10-06-2013ರ ಸರ್ಕಾರಿ ಆದೇಶ ಸಂಖ್ಯೆ:ಆಇ 12 ಎಸ್ಆರ್‌ಪಿ 2012 (XI).

---

2011ರ ಅಧಿಕಾರಿ ವೇತನ ಸಮಿತಿಯ ಶಿಫಾರಸ್ಸಿನಂತೆ ಅಂಗವಿಕಲ ಸರ್ಕಾರಿ ನೌಕರರು ಕಛೇರಿಗೆ ಹೋಗಿ ಬರಲು ಬಳಸುವ ಮೋಟಾರು ಚಾಲಿತ/ಯಾಂತ್ರಿಕ (ಮೆಕ್ಯಾನಿಕಲ್) ವಿಶೇಷ ವಾಹನಗಳನ್ನು ಖರೀದಿಸಲು ವಿಶೇಷ ವಾಹನದ ಬೆಲೆಯ ಶೇ.25ರಷ್ಟನ್ನು, ಗರಿಷ್ಠ ರೂ.25,000/-ಗಳ ಮಿತಿಗೊಳಪಟ್ಟು ಅವರ ಸೇವಾ ಅವಧಿಯಲ್ಲಿ ಒಂದು ಬಾರಿ ಮಾತ್ರ ಹಿಂಬರಿಸಲು ಉಲ್ಲೇಖಿತ ದಿನಾಂಕ: 10-06-2013ರ ಸರ್ಕಾರಿ ಆದೇಶದಲ್ಲಿ ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ.

ದಿನಾಂಕ 10-06-2013ರ ಸರ್ಕಾರಿ ಆದೇಶದಂತೆ ಅಂಗವಿಕಲ ಸರ್ಕಾರಿ ನೌಕರರು ವಿಶೇಷ ಯಾಂತ್ರಿಕ ವಾಹನವನ್ನು ಖರೀದಿಸಲು ನೀಡುವ ಸಹಾಯಧನವನ್ನು ಯಾವ ಲೆಕ್ಕಶೀರ್ಷಿಕೆಯಡಿಯಿಂದ ಹಿಂಬರಿಸಬೇಕು ಎಂಬ ಬಗ್ಗೆ ಹಲವಾರು ಇಲಾಖೆಗಳು ಸ್ಪಷ್ಟೀಕರಣ ಕೋರಿರುತ್ತವೆ.

ಅಂಗವಿಕಲ ಸರ್ಕಾರಿ ನೌಕರರು ಖರೀದಿಸುವ ವಿಶೇಷ ಯಾಂತ್ರಿಕ ವಾಹನದ ಬೆಲೆಯ ಶೇ.25 ರಷ್ಟನ್ನು ಗರಿಷ್ಠ ರೂ.25,000/-ಗಳ ಮಿತಿಗೊಳಪಟ್ಟು ಸಹಾಯಧನವನ್ನು ಹಿಂಬರಿಸಲು ಎಲ್ಲಾ ಇಲಾಖೆಗಳಲ್ಲಿ ಇದಕ್ಕಾಗಿ ಪ್ರತ್ಯೇಕ ಹೊಸ ಲೆಕ್ಕಶೀರ್ಷಿಕೆಯನ್ನು ತೆರೆಯದೆ, ಈ ಬಾಬ್ತನ್ನು ಆಯಾ ಇಲಾಖೆಗಳ ಲೆಕ್ಕಶೀರ್ಷಿಕೆಗಳಡಿ ಇರುವ **'ಇತರೆ ವೆಚ್ಚಗಳು'** ಅಡಿಯಲ್ಲಿ ಒದಗಿಸಿರುವ ಅನುದಾನದಿಂದಲೇ ಹಿಂಬರಿಸಲು ಸೂಚಿಸಿದೆ.

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.

4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಇಲಾಖಾ ಮುಖ್ಯಾಧಿಕಾರಿಗಳು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**